24
7
18/12

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ. ಬಿ.ಜಿ.ಪಾಟೀಲ ಇವರು ನಿಯಮ 330 ರ ಅಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಹೇಳಿಕೆ.

**ಸೂಚನೆ:**

ಕಲ್ಯಾಣ ಕರ್ನಾಟಕದ ಭಾಗದಲ್ಲಿ ಪಾರಂಪರಿಕ ವೈದ್ಯಪದ್ಧತಿಯು ಭಾರತೀಯ ವೈದ್ಯ ಮೂಲ ತಳಹದಿಯಾಗಿದ್ದು, ಸುಮಾರು 3000ರಕ್ಕೂ ಹೆಚ್ಚು ಪಾರಂಪರಿಕ ವೈದ್ಯರಿದ್ದು, ಪಾರಂಪರಿಕ ವೈದ್ಯಜ್ಞಾನವನ್ನು ದೇಶಿ ವೈದ್ಯ, ನಾಟಿ ವೈದ್ಯ, ಜನಪದ ವೈದ್ಯ, ಸಾಂಪ್ರದಾಯಿಕ ವೈದ್ಯ ಮತ್ತು ಅನುವಂಶಿಕ ವೈದ್ಯರೆಂದು ಕರೆಯಲ್ಪಡುವ ಈ ಪಾರಂಪರಿಕ ವೈದ್ಯರು ತಮ್ಮ ಪೂರ್ವಜರು ಹೇಳಿಕೊಟ್ಟ ಹಾಗೂ ಸುತ್ತಮುತ್ತ ಪ್ರದೇಶಗಳಲ್ಲಿ ಸಿಗುವಂತ ಗಿಡಮೂಲಿಕೆ ಹಾಗೂ ನಾರುಬೇರಿನ ಕಷಾಯ ಚೂರ್ಣಗಳಿಂದ ರೋಗಿಗಳಿಗೆ ಚಿಕಿತ್ಸೆ ನೀಡುತ್ತಾ ಬಂದಿದ್ದಾರೆ.

ಗ್ರಾಮೀಣಾ ಪ್ರದೇಶಗಳಲ್ಲಿ ಪದವಿ ಹೊಂದಿದ ವೈದ್ಯರುಗಳು ಸೇವೆ ಸಕಾಲದಲ್ಲಿ ಸಿಗದಿದ್ದ ಸಂದರ್ಭಗಳಲ್ಲಿಯೂ ಪಾರಂಪರಿಕ ವೈದ್ಯರು ರೋಗಿಗಳಿಗೆ ಗಿಡಮೂಲಿಕೆಗಳ ಉಪಚಾರ ಮಾಡಿ ರೋಗ ಗುಣಪಡಿಸುತ್ತಿದ್ದಾರೆ. ಅಷ್ಟೇ ಅಲ್ಲದೆ ಜಾನುವಾರುಗಳಿಗೂ ಚಿಕಿತ್ಸೆ ನೀಡುತ್ತ ತಮ್ಮ ಅಸ್ತಿತ್ವವನ್ನು ಉಳಿಸಿಕೊಂಡು ಬಂದಿರುತ್ತಾರೆ.

ಆದರಿಂದ ಮನೆಮದ್ದು ಮತ್ತು ಹೊಲಗದ್ದೆಗಳಲ್ಲಿ ಬೆಳೆದ ಗಿಡಮೂಲಿಕೆಗಳಿಂದ ಕಾಯಿಲೆಗಳನ್ನು ಗುಣಪಡಿಸುವ ಇವರನ್ನು ಪಾರಂಪರಿಕ ವೈದ್ಯರೆಂದು ಪರಿಗಣಿಸಿ ಇವರ ಮಕ್ಕಳಿಗೆ ಬಿ.ಎ.ಎಂ.ಎಸ್ ವಿಧ್ಯಾಭ್ಯಾಸದಲ್ಲಿ ಶೇ.2 ರಷ್ಟು ಮೀಸಲಾತಿ ಕಲ್ಪಿಸಲು ಕ್ರಮವಹಿಸುವ ಕುರಿತು.

**ಹೇಳಿಕೆ:**

ಆಯುಷ್ ಇಲಾಖೆಯಲ್ಲಿ ಪ್ರಸ್ತುತ ಸರ್ಕಾರ ಆದೇಶ ಸಂಖ್ಯೆ:ಆಕುಕ/257/ಪಿಟಿಡಿ/2016, ದಿನಾಂಕ: 05-04-2017 ರಲ್ಲಿ ಪಾರಂಪರಿಕ ವೈದ್ಯರ ಮಕ್ಕಳಿಗೆ ವಿಶೇಷ ಪ್ರಕರಣದಡಿ ಪ್ರವೇಶಾತಿ ಪರಿಗಣಿಸಿ 2017-18 ನೇ ಶೈಕ್ಷಣಿಕ ಸಾಲಿನಿಂದ ಜಾರಿಗೆ ಬರುವಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಸಿ.ಇ.ಟಿ ಮುಖಾಂತರ ಹಂಚಲ್ಪಡುವ ಸರ್ಕಾರಿ ಕೋಟಾ ಸೀಟುಗಳಲ್ಲಿ ಒಟ್ಟು 02 (ಎರಡು) ಸೀಟುಗಳನ್ನು ಈ ಕೆಳಗಿನಂತೆ ಮೀಸಲಿರಿಸಿ ಆದೇಶಿಸಲಾಗಿರುತ್ತದೆ (ಪ್ರತಿ ಲಗತ್ತಿಸಿದೆ).

| ಕ್ರ. ಸಂ | ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯಗಳ ಹೆಸರು | ಮೀಸಲಾತಿ ಸೀಟುಗಳ ಸಂಖ್ಯೆ |
|---|---|---|
| 1 | ತಾರಾನಾಥ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಬಳ್ಳಾರಿ | 01 |
| 2 | ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಮೈಸೂರು | 01 |

ಸಂಖ್ಯೆ: ಆಕುಕ 455 ಪಿಟಿಡಿ 2025

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

03

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪಾರಂಪರಿಕ ವೈದ್ಯರ ಮಕ್ಕಳಿಗೆ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ವ್ಯಾಸಂಗಕ್ಕೆ ಉಚಿತ ಆಯುರ್ವೇದ ವೈದ್ಯಕೀಯ ಸೀಟುಗಳನ್ನು ಮೀಸಲಿಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಆಕುಕ 216 ಪಿಟಿಡಿ 2016, ದಿನಾಂಕ: 03.08.2016.
2. ಸರ್ಕಾರದ ತಿದ್ದುಪಡಿ ಸಂಖ್ಯೆ:ಆಕುಕ 216 ಪಿಟಿಡಿ 2016, ದಿನಾಂಕ: 03.08.2016.
3. ಆಯುಷ್ ನಿರ್ದೇಶಕರ ಪ್ರಸ್ತಾವನೆ ಸಂಖ್ಯೆ:ಆಯುಷ್/39/ಅಭಿವೃದ್ಧಿ(3)/2016-17, ದಿನಾಂಕ:16.03.2017.

***

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಸಂ (1)ರ ಸರ್ಕಾರದ ಆದೇಶದಲ್ಲಿ, ಕರ್ನಾಟಕ ರಾಜ್ಯದಲ್ಲಿರುವ ಸರ್ಕಾರಿ ಆಯುಷ್ ವೈದ್ಯಕೀಯ ಮಹಾವಿದ್ಯಾಲಯಗಳು ಮತ್ತು ಅನುದಾನಿತ ಆಯುರ್ವೇದ ಮಹಾವಿದ್ಯಾಲಯಗಳಲ್ಲಿರುವ ಕೋರ್ಸ್‌ಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಹಂಚಲ್ಪಡುವ ಸರ್ಕಾರಿ ಕೋಟಾ ಸೀಟ್‌ಗಳಲ್ಲಿ ಶೇ.2 ರಷ್ಟು ಸೀಟುಗಳನ್ನು ಪಾರಂಪರಿಕ ವೈದ್ಯರ ಮಕ್ಕಗಳಿಗೆ 2017-18ನೇ ಶೈಕ್ಷಣಿಕ ಸಾಲಿನಿಂದ ಜಾರಿಗೆ ಬರುವಂತೆ ಮೀಸಲಿಡಲಾಗಿದೆ.

ಮೇಲೆ ಓದಲಾದ ಕ್ರಸಂ. (2)ರ ಸರ್ಕಾರದ ತಿದ್ದುಪಡಿಯಲ್ಲಿ ಸರ್ಕಾರದ ಆದೇಶ ಸಂಖ್ಯೆ:ಆಕುಕ 216 ಪಿಟಿಡಿ 2016, ದಿನಾಂಕ: 03.08.2016ರಲ್ಲಿ ಪಾರಂಪರಿಕ ವೈದ್ಯರ ಮಕ್ಕಳಿಗೆ 2017-18ನೇ ಶೈಕ್ಷಣಿಕ ಸಾಲಿನಿಂದ ಶೇ.2 ರಷ್ಟು ಸೀಟುಗಳನ್ನು ಮೀಸಲಿಟ್ಟಿರುವುದನ್ನು 2016-17ನೇ ಶೈಕ್ಷಣಿಕ ಸಾಲಿನಿಂದ ಎಂದು ತಿದ್ದುಪಡಿ ಮಾಡಲಾಗಿದೆ.

ಮೇಲೆ ಓದಲಾದ ಕ್ರಸಂ. (3)ರ ಪ್ರಸ್ತಾವನೆಯಲ್ಲಿ, ಆಯುಷ್ ನಿರ್ದೇಶಕರು, ಆಯುಷ್ ಇಲಾಖೆ, ಬೆಂಗಳೂರು ಇವರು, ಸರ್ಕಾರದ ಆದೇಶ ಸಂಖ್ಯೆ:ಸಕಇ 225 ಬಿಸಿಎ 2000, ದಿನಾಂಕ: 30.03.2002ರ ಹೊಸ ಕೆನೆಪದರ ಮತ್ತು ಭಾರತದ ಸಂವಿಧಾನದ ಅನುಚ್ಛೇದ 15(4)ರಂತೆ ವಿದ್ಯಾ ಸಂಸ್ಥೆಗಳಲ್ಲಿ ಪ್ರವೇಶ ಮತ್ತು ಅನುಚ್ಛೇದ 16(4)ರ ಮೇರೆಗೆ ನೇಮಕಾತಿಗಳಲ್ಲಿ ಮೀಸಲಾತಿಗಳನ್ನು ವರ್ಗವಾರು ನಿಗದಿಪಡಿಸಿದೆ ಹಾಗೂ ಗೌ.ಸರ್ವೋಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:438/1994ರ ಮಧ್ಯಂತರ ಆದೇಶದನ್ವಯ ಯಾವುದೇ ಸಂದರ್ಭದಲ್ಲಿ ಮೀಸಲಾತಿಯು ಶೇ. 50ನ್ನು ಮೀರುವಂತಿಲ್ಲ. ಹಾಗಾಗಿ ಶೇ.50ರ ಮೀಸಲಾತಿಯನ್ನು ಒಟ್ಟು 07 ವರ್ಗಗಳಿಗೆ ಹಂಚಿಕೆ ಮಾಡಲಾಗಿದೆ. ಪಾರಂಪರಿಕ ವೈದ್ಯರ ಮಕ್ಕಳಿಗೆ ಶೇ.2ರಷ್ಟು ಸೀಟುಗಳನ್ನು ಯಾವ ಪ್ರವರ್ಗದಲ್ಲಿ ಕಡಿತಗೊಳಿಸಿ ಸರಿ ಹೊಂದಿಸಬೇಕೆಂಬ ಬಗ್ಗೆ ಸ್ಪಷ್ಟತೆ ಇರುವುದಿಲ್ಲ ಹಾಗೂ ಕಾನೂನಾತ್ಮಕ ತೊಡಕುಗಳಿರುತ್ತವೆ. 2016-17ನೇ ಸಾಲಿಗೆ ಪಾರಂಪರಿಕ ವೈದ್ಯರ ಮಕ್ಕಳಿಗೆ 02 ಸೀಟುಗಳನ್ನು ನಿಗದಿಪಡಿಸಲಾಗಿದ್ದು, ಅದರಲ್ಲಿ ಕೇವಲ ಒಬ್ಬ ಅರ್ಹ ವಿದ್ಯಾರ್ಥಿ ಮಾತ್ರ ಪ್ರವೇಶ ಪಡೆದಿರುತ್ತಾರೆ ಮತ್ತು ಪಾರಂಪರಿಕ ವೈದ್ಯ ಪರಿಷತ್‌ನಲ್ಲಿ ನೋಂದಾಯಿತ ಪಾರಂಪರಿಕ ವೈದ್ಯ ವೃಂದದವರು ಕೇವಲ 1700 ಜನರಿರುತ್ತಾರೆ ಹಾಗೂ ಭಾರತ ಸರ್ಕಾರದ ಆಯುಷ್ ಮಂತ್ರಾಲಯದ ಪತ್ರ ಸಂಖ್ಯೆ:ಎಲ್-20025/4/2012-ಐಸಿ/ಆಯುಷ್, ದಿನಾಂಕ: 10.04.2012ರಲ್ಲಿ Indian Council for Cultural

02

02



Relations (ICCR) ಇವರ ಮುಖಾಂತರ ICCR sponsored foreign nationals under AYUSH scholarship ಕೋಟಾ ಅಡಿಯಲ್ಲಿ ವಿದ್ಯಾರ್ಥಿಗಳಿಗೆ ಕೆಲವು ಆಯುಷ್ ಮಹಾವಿದ್ಯಾಲಯಗಳಲ್ಲಿ ಸರ್ಕಾರಿ ಕೋಟಾ ಸೀಟುಗಳನ್ನು ನಿಗದಿಪಡಿಸಿ ವಿಶೇಷ ಕೋಟಾದಡಿ ಪ್ರವೇಶಾತಿ ನೀಡಲಾಗುತ್ತಿದೆ. ಈ ಎಲ್ಲಾ ಅಂಶಗಳ ಹಿನ್ನಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ:ಆಕುಕ 216 ಪಿಟಿಡಿ 2016, ದಿನಾಂಕ: 03.08.2016 ಮತ್ತು ತಿದ್ದುಪಡಿ ದಿನಾಂಕ: 09.08.2016ರಲ್ಲಿ ಪಾರಂಪರಿಕ ವೈದ್ಯರ ಮಕ್ಕಗಳಿಗೆ ಸರ್ಕಾರಿ/ಅನುದಾನಿತ ಆಯುಷ್ ಮಹಾವಿದ್ಯಾಲಯಗಳಲ್ಲಿ ಶೇ.2 ರಷ್ಟು ಸರ್ಕಾರಿ ಕೋಟಾ ಸೀಟುಗಳಲ್ಲಿ ಮೀಸಲಾತಿ ಸೌಲಭ್ಯವನ್ನು ಕಲ್ಪಿಸಿದಲ್ಲಿ ಸುಮಾರು 30 ಸೀಟ್‌ಗಳನ್ನು ಕಾಯ್ದಿರಿಸಬೇಕಾಗುತ್ತದೆ. ಇದರಿಂದಾಗಿ ಪ್ರತಿಭಾವಂತ ಅರ್ಹ ವಿದ್ಯಾರ್ಥಿಗಳು ಸರ್ಕಾರಿ ಕೋಟಾ ಸೀಟುಗಳಿಂದ ವಂಚಿತರಾಗುವ ಸಾಧ್ಯತೆ ಹೆಚ್ಚಾಗಿರುತ್ತದೆ. ಆದ್ದರಿಂದ, ಪ್ರತಿಭಾವಂತ ಅರ್ಹ ವಿದ್ಯಾರ್ಥಿಗಳ ಹಿತದೃಷ್ಟಿಯನ್ನು ಪರಿಗಣಿಸಿ ಭಾರತ ಸರ್ಕಾರದ ಆಯುಷ್ ಮಂತ್ರಾಲಯ, ನವದೆಹಲಿ ಇವರು ICCR ಕೋಟಾ ಅಡಿಯಲ್ಲಿ ವಿದ್ಯಾರ್ಥಿಗಳಿಗೆ ವಿಶೇಷ ಪ್ರಕರಣದಡಿ ಪ್ರವೇಶ ಕಲ್ಪಿಸಿದಂತೆಯೇ. ಪಾರಂಪರಿಕ ವೈದ್ಯರ ಮಕ್ಕಳಿಗೂ ಸಹ ವಿಶೇಷ ಪ್ರಕರಣದಡಿ ಪ್ರವೇಶಾತಿ ಪರಿಗಣಿಸಿ ತಾರಾನಾಥ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಬಳ್ಳಾರಿ ಹಾಗೂ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಮೈಸೂರು ಇಲ್ಲಿ ತಲಾ ಒಂದರಂತೆ ಒಟ್ಟು ಎರಡು ಸೀಟ್‌ಗಳನ್ನು ಮೀಸಲಿರಿಸಿ ಶೇ.2ರಷ್ಟು ಮೀಸಲಾತಿಯನ್ನು ನಿಗದಿಪಡಿಸಿರುವ ಸರ್ಕಾರದ ಆದೇಶವನ್ನು ಮಾರ್ಪಡಿಸುವಂತೆ ಕೋರಿರುತ್ತಾರೆ.

ಆಯುಷ್ ನಿರ್ದೇಶಕರ ಪ್ರಸ್ತಾವನೆ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಪಾರಂಪರಿಕ ವೈದ್ಯರ ಮಕ್ಕಳಿಗೆ ವಿಶೇಷ ಪ್ರಕರಣದಡಿ ಪ್ರವೇಶಾತಿ ಪರಿಗಣಿಸಿ ತಾರಾನಾಥ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಬಳ್ಳಾರಿ ಹಾಗೂ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಮೈಸೂರು ಇಲ್ಲಿ ತಲಾ ಒಂದರಂತೆ ಒಟ್ಟು ಎರಡು ಸೀಟ್‌ಗಳನ್ನು ಮೀಸಲಿರಿಸಿ, ಈಗಾಗಲೇ ಸರ್ಕಾರಿ/ಅನುದಾನಿತ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ಶೇ.2ರಷ್ಟು ಸೀಟುಗಳನ್ನು ಮೀಸಲಿರಿಸಿರುವ ಸರ್ಕಾರದ ಆದೇಶ ಸಂಖ್ಯೆ:ಆಕುಕ 216 ಪಿಟಿಡಿ 2016, ದಿನಾಂಕ:03.08.2016 ಮತ್ತು ತಿದ್ದುಪಡಿ ದಿನಾಂಕ: 09.08.2016ನ್ನು ಹಿಂಪಡೆಯಲು ನಿರ್ಧರಿಸಿದೆ. ಆದುದರಿಂದ, ಈ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ:ಆಕುಕ 257 ಪಿಟಿಡಿ 2016, ಬೆಂಗಳೂರು, ದಿನಾಂಕ:05.04.2017.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡಲು ಭಾರತ ಸರ್ಕಾರದ ಆಯುಷ್ ಮಂತ್ರಾಲಯ, ನವದೆಹಲಿ ಇವರು ICCR ಕೋಟಾ ಅಡಿಯಲ್ಲಿ ವಿದ್ಯಾರ್ಥಿಗಳಿಗೆ ವಿಶೇಷ ಪ್ರಕರಣದಡಿ ಪ್ರವೇಶ ಕಲ್ಪಿಸಿದಂತೆಯೇ ಪಾರಂಪರಿಕ ವೈದ್ಯರ ಮಕ್ಕಳಿಗೆ ವಿಶೇಷ ಪ್ರಕರಣದಡಿ ಪ್ರವೇಶಾತಿ ಪರಿಗಣಿಸಿ 2017-18ನೇ ಶೈಕ್ಷಣಿಕ ಸಾಲಿನಿಂದ ಜಾರಿಗೆ ಬರುವಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಸಿಇಟಿ ಮುಖಾಂತರ ಹಂಚಲ್ಪಡುವ ಸರ್ಕಾರಿ ಕೋಟಾ ಸೀಟುಗಳಲ್ಲಿ ಒಟ್ಟು 02 (ಎರಡು) ಸೀಟುಗಳನ್ನು ಈ ಕೆಳಗಿನಂತೆ ಮೀಸಲಿರಿಸಿ ಆದೇಶಿಸಿದೆ.

| ಕ್ರ ಸಂ. | ಆ.ವೈ.ಮಹಾವಿದ್ಯಾಲಯಗಳ ಹೆಸರು | ಮೀಸಲಾತಿ ಸೀಟ್‌ಗಳ ಸಂಖ್ಯೆ |
|---|---|---|
| 1. | ತಾರಾನಾಥ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಬಳ್ಳಾರಿ. | 01 |
| 2. | ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಮೈಸೂರು. | 01 |

ಸರ್ಕಾರದ ಆದೇಶ ಸಂಖ್ಯೆ:ಆಕುಕ 216 ಪಿಟಿಡಿ 2016, ದಿನಾಂಕ: 03.08.2016 ಮತ್ತು ತಿದ್ದುಪಡಿ ಸಂಖ್ಯೆ:ಆಕುಕ 216 ಪಿಟಿಡಿ 2016, ದಿನಾಂಕ: 09.08.2016ನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆದಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಕಮಲಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾರತೀಯ ವೈದ್ಯ ಪದ್ಧತಿ)
(ದೂರವಾಣಿ ಸಂಖ್ಯೆ:22034292)

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಈ ಆದೇಶವನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಪ್ರಕಟಿತ 100 ಪ್ರತಿಗಳನ್ನು ಶಾಖೆಗೆ ಒದಗಿಸಲು.

ಇವರಿಗೆ:

1) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ನಿರ್ದೇಶಕರು, ಆಯುಷ್ ನಿರ್ದೇಶನಾಲಯ, ಧನ್ವಂತರಿ ರಸ್ತೆ, ಬೆಂಗಳೂರು.
3) ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು.
4) ಪ್ರಾಂಶುಪಾಲರು, ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಆಯುಷ್ ಮಹಾವಿದ್ಯಾಲಯಗಳು (ನಿರ್ದೇಶಕರು, ಆಯುಷ್ ಇಲಾಖೆ ಇವರ ಮುಖಾಂತರ).

ಪ್ರತಿಗಳು:-

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನ ಸೌಧ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
3. ಸರ್ಕಾರದ ಉಪ ಕಾರ್ಯದರ್ಶಿ-3, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
4. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.